# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : **1134** |
| ಸದಸ್ಯರ ಹೆಸರು | : ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 25.07.2024. |
| ಉತ್ತರಿಸುವ ಸಚಿವರು | : ಗೃಹ ಸಚಿವರು. |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದೀಚೆಗೆ ಕೊಲೆ, ಸುಲಿಗೆ, ದರೋಡೆ, ಕಳ್ಳತನ, ಅಪಹರಣ, ಗಲಭೆ, ಗುಂಪು ಘರ್ಷಣೆಗಳು ಎಲ್ಲೆಲ್ಲಿ ಎಷ್ಟೆಷ್ಟು ಪ್ರಕರಣಗಳು ನಡೆದಿರುತ್ತವೆ; (ಪೂರ್ಣ ವಿವರ ನೀಡುವುದು) | ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದೀಚೆಗೆ ಕೊಲೆ, ಸುಲಿಗೆ, ದರೋಡೆ, ಕಳ್ಳತನ, ಅಪಹರಣ, ಗಲಭೆ, ಗುಂಪು ಘರ್ಷಣೆಗಳು ನಡೆದಿರುವ ಪ್ರಕರಣಗಳ ಸಂಖ್ಯೆ ಕೆಳಗಿನಂತಿರುತ್ತದೆ:- |

| ಕ್ರಸ | ವಿಷಯ | 2023 | 2024 (ಜೂನ್ 30 ರವರೆಗೆ) |
|---|---|---|---|
| 1 | ಕೊಲೆ | 1296 | 631 |
| 2 | ಸುಲಿಗೆ | 1246 | 664 |
| 3 | ದರೋಡೆ | 180 | 83 |
| 4 | ಕಳ್ಳತನ | 2152 | 978 |
| 5 | ಅಪಹರಣ | 3676 | 2134 |
| 6 | ಗಲಭೆ / ಗುಂಪು ಘರ್ಷಣೆ | 3903 | 2028 |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಆ | ಮೇಲ್ಕಂಡ ಸಮಾಜ ಘಾತಕ ಕೃತ್ಯಗಳಿಂದ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕುಗಿದ್ದು ಇದರ ನಿವಾರಣೆಗೆ ಗೃಹ ಇಲಾಖಾ ಅಧಿಕಾರಿಗಳು ಸಂಪೂರ್ಣ ವಿಫಲವಾಗಿರುವುದು ನಿಜವೇ; | ಸಮಾಜ ಘಾತಕ ಕೃತ್ಯಗಳಿಂದ ಕಾನೂನು ಸುವ್ಯವಸ್ಥೆ ಕಾಪಾಡಲು ಈ ಕೆಳಗಿನಂತೆ ಕ್ರಮಕೈಗೊಳ್ಳಲಾಗಿರುತ್ತದೆ:-<br>➢ ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವಂತಹ ರೌಡಿಗಳಿಗೆ ಕಠಿಣವಾದ ಎಚ್ಚರಿಕೆಗಳನ್ನು ನೀಡಿ, ಯಾವುದೇ ಕೃತ್ಯಗಳನ್ನು ಮಾಡಿದಾಗ ಅವರ ಮೇಲೆ ಆಗುವ ಪರಿಣಾಮಗಳ ಗಂಭೀರತೆಯ ಬಗ್ಗೆ ಅವರಿಗೆ ಮನವರಿಕೆ ಮಾಡಿಕೊಡಲಾಗಿರುತ್ತದೆ. ಇಂತಹ ವ್ಯಕ್ತಿಗಳ ಮೇಲೆ ಮುಂಜಾಗ್ರತಾ ಕ್ರಮಗಳಾದ ಪಿಎಆರ್ ದಾಖಲಿಸಿದ್ದು, ಗಡಿಪಾರು ಮಾಡಲು ಕ್ರಮಕೈಗೊಳ್ಳಲಾಗುತ್ತಿರುತ್ತದೆ.<br>➢ ರಾಜ್ಯದಲ್ಲಿ ದಾಖಲಾಗುತ್ತಿರುವ ರೌಡಿಶೀಟರ್‌ಗಳನ್ನು ಗಡಿಪಾರು ಮಾಡಿ, ಸದರಿಯವರುಗಳ ವಿರುದ್ಧ ಗೂಂಡಾಕಾಯ್ದೆ ಪಿಎಆರ್ ಮತ್ತು ಬಾಂಡ್ ಓವರ್‌ಗಳನ್ನು ಮಾಡಲಾಗುತ್ತಿರುತ್ತದೆ.<br>➢ ಪೊಲೀಸ್ ಠಾಣೆಗಳಲ್ಲಿ ದಾಖಲಾಗುತ್ತಿರುವ ಪ್ರಕರಣಗಳನ್ನು ನಿಷ್ಪಕ್ಷಪಾತವಾಗಿ ತನಿಖೆಯನ್ನು ಮಾಡಿ ಶಿಕ್ಷೆಗೆ ಒಳಪಡಿಸಲು ಎಲ್ಲಾ ಕ್ರಮಕೈಗೊಳ್ಳಲಾಗುತ್ತಿರುತ್ತದೆ. |

| | | |
|---|---|---|
| | | ➢ ಸಾಮಾಜಿಕ ಜಾಲ ತಾಣಗಳಲ್ಲಿ ಕೋಮು ಸೌಹಾರ್ದತೆ & ಕದಡುವ ವ್ಯಕ್ತಿಗಳನ್ನು ಗುರುತಿಸಿ ಅಂಥವರ ಮೇಲೆ ನಿಗಾ ಇಡಲಾಗುತ್ತಿದೆ.<br>➢ ದಿನದ 24 ಗಂಟೆಗಳ ಕಾಲ ಗಸ್ತು ಕರ್ತವ್ಯಕ್ಕಾಗಿ ಶಕ್ತಿ ಪೆಟ್ರೋಲಿಂಗ್, ಹೊಯ್ಸಳ ವಾಹನ ನಿಯಮಿತವಾಗಿ ನಿಯೋಜಿಸಲಾಗಿರುತ್ತದೆ. |
| ಇ | ಕಾನೂನು ಸುವ್ಯವಸ್ಥೆ ಕುಸಿಯಲು ಗುಪ್ತಚರ ಇಲಾಖೆ ಹಾಗೂ ಇತರ ವಿಭಾಗಗಳ ವಿಫಲತೆಯೂ ಮುಖ್ಯ ಕಾರಣವಲ್ಲವೆ; | ಗುಪ್ತಚರ ಇಲಾಖೆಯು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ನಡೆಯುವ ಘಟನೆಗಳ ಬಗ್ಗೆ ಮುಂಗಡವಾಗಿ ಮಾಹಿತಿಯನ್ನು ಸಂಗ್ರಹಿಸಿ ಸಂಬಂಧಪಟ್ಟ ಜಿಲ್ಲಾ ಘಟಕಗಳಿಗೆ ಮಾಹಿತಿಯನ್ನು ನೀಡಿ, ಅನೇಕ ಕಾನೂನು ಸುವ್ಯವಸ್ಥೆ ಹದಗೆಡಿಸುವಂತಹ ಘಟನೆಗಳನ್ನು ತಡೆದಿರುತ್ತದೆ ಹಾಗೂ ಮುಂದೆ ಘಟಿಸಬಹುದಾದ ಸಮಸ್ಯೆಗಳ ಬಗ್ಗೆ ಪ್ರಾರಂಭಿಕ ಹಂತದಲ್ಲಿಯೇ ಮಾಹಿತಿಗಳನ್ನು ಸಂಗ್ರಹಿಸಿ ಸಂಬಂಧಪಟ್ಟ ಇಲಾಖೆಗಳಿಗೆ ಪತ್ರ ವ್ಯವಹಾರ ಮಾಡಲಾಗುತ್ತಿರುತ್ತದೆ. |
| ಈ | ಇವುಗಳ ನಿವಾರಣೆಗೆ ಸರ್ಕಾರ ಕೈಗೊಳ್ಳುವ ಕ್ರಮಗಳಾವುವು? | ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಪೊಲೀಸ್ ಇಲಾಖೆಯು ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಂಡಿದೆ:-<br>➢ ಕೊಲೆ ಪ್ರಕರಣಗಳು ವ್ಯಕ್ತಿಗಳ / ಗುಂಪುಗಳ ಮದ್ಯದ ವೈಯಕ್ತಿಕ ದ್ವೇಷ ಮತ್ತು ಪ್ರತೀಕಾರದಿಂದ ಸಂಭವಿಸಬಹುದಾಗಿರುತ್ತವೆ. ಆದ್ದರಿಂದ ಈ ರೀತಿಯ ಮಾಹಿತಿ ದೊರೆತ ಕೂಡಲೇ ಪೊಲೀಸರು ಸೂಕ್ತ ಕ್ರಮಕೈಗೊಂಡು ಕೊಲೆ / ಹತ್ಯೆ ಘಟನೆಗಳು ಜರುಗದಂತೆ ನೋಡಿಕೊಳ್ಳಲಾಗುವುದು.<br>➢ ಬಹಳಷ್ಟು ಪ್ರಕರಣಗಳಲ್ಲಿ ದೂರು ಮತ್ತು ಪ್ರತಿ ದೂರು ಬಂದಂತಹ ಸಂದರ್ಭದಲ್ಲಿ ಎರಡು ದೂರುದಾರರು ಮತ್ತು ಪ್ರತಿ ದೂರುದಾರರಿಗೆ ತಿಳುವಳಿಕೆ ನೀಡಿ, ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಪಿಎಆರ್ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br>➢ ಯಾವುದೇ ರೀತಿಯ ದೂರು ಬಂದಾಗಲೂ ಸಹ ದೂರನ್ನು ಕೂಲಂಕಷವಾಗಿ ಪರಿಶೀಲಿಸಿ ಪೊಲೀಸ್ ಠಾಣೆಯ ದಾಖಲಾತಿಯಲ್ಲಿ ನಮೂದಿಸಿ ಪ್ರತಿ ದೂರನ್ನು ಸಹ ಬಗೆಹರಿಸಲು ಕ್ರಮಕೈಗೊಳ್ಳಲಾಗುತ್ತಿದೆ.<br>➢ ಸಮಾಜದಲ್ಲಿ ಅಶಾಂತಿ ತೋರಿದ ವ್ಯಕ್ತಿಗಳನ್ನು ಕಾನೂನಿನ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಸಮಾಜದಲ್ಲಿ ಶಾಂತಿ ಕಾಪಾಡುವಂತೆ ಬಾಂಡ್‌ಗಳನ್ನು ಬರೆಸಿಕೊಳ್ಳಲಾಗುತ್ತಿದೆ ಹಾಗೂ ಕೆಲವೊಂದು ಪ್ರಕರಣಗಳಲ್ಲಿ ಸಮಾಜಕ್ಕೆ ಅಶಾಂತಿ ತರುವಂತಹ ವ್ಯಕ್ತಿಗಳನ್ನು ಗಡಿಪಾರು ಮಾಡಲು ಹಾಗೂ ಗೂಂಡಾ ಕಾಯ್ದೆಯಡಿಯಲ್ಲಿ ಕ್ರಮವಹಿಸಲಾಗುತ್ತಿದೆ.<br>➢ ಯಾವುದೇ ರೀತಿಯ ಘಟನೆಗಳು ಜರುಗುವ ಸಂದರ್ಭದಲ್ಲಿ ಸಮಯಕ್ಕೆ ಸರಿಯಾಗಿ ಘಟನಾ ಸ್ಥಳಕ್ಕೆ ಪೊಲೀಸರು ಅಧಿಕಾರಿಗಳು ತಲುಪುವ ಸಂಬಂಧ ಕರ್ನಾಟಕ ರಾಜ್ಯದಲ್ಲಿ ಇ.ಆರ್.ಎಸ್.ಎಸ್. (112) ವ್ಯವಸ್ಥೆಯನ್ನು ನಿರ್ವಹಿಸಲಾಗುತ್ತಿದೆ.<br>➢ ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ಪ್ಯಾನಿಕೋಡ್, ಪಿಂಕ್ ಹೊಯ್ಸಳ, ಮಹಿಳಾ ಠಾಣೆ, ಮಹಿಳಾ ವಿಶೇಷ ಪೊಲೀಸ್ ಪಡೆಗಳನ್ನು ಸ್ಥಾಪಿಸಲಾಗಿರುತ್ತದೆ. |

| | | |
|---|---|---|
| | | ➢ ಠಾಣಾ ವ್ಯಾಪ್ತಿಯಲ್ಲಿ ಶಾಂತಿ ಸಭೆ, ಯುವಜನ ಸಭೆ, ಮೊಹಲ್ಲ ಮೀಟಿಂಗ್, ನಾಗರೀಕ ಸಮಿತಿ ಸಭೆಗಳನ್ನು ನಡೆಸಿ ಸಾರ್ವಜನಿಕರಿಗೆ ಮತ್ತು ಯುವಕರಿಗೆ ತಿಳುವಳಿಕೆಗಳನ್ನು ನೀಡಲಾಗುತ್ತಿದೆ ಹಾಗೂ ವೃತ್ತ ಉಪ ವಿಭಾಗ, ಜಿಲ್ಲಾ ಮಟ್ಟದಲ್ಲಿಯೂ ಸಹ ಸಭೆಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವ ವ್ಯಕ್ತಿಗಳು/ ಸಂಘಟನೆಗಳು/ಸಾಮಾಜಿಕ ಜಾಲತಾಣಗಳ ಬಗ್ಗೆ ಸತತ ನಿಗಾ ಇಡಲಾಗಿದೆ.<br>➢ ಠಾಣಾ ವ್ಯಾಪ್ತಿಯಲ್ಲಿ ರಾತ್ರಿ ಬೀಟ್ ಮತ್ತು ಶುಭೋದಯ (ಗುಡ್ ಮಾರ್ನಿಂಗ್) ಬೀಟುಗಳನ್ನು ಕೈಗೊಳ್ಳಲಾಗಿದೆ. ಏಕ ಕಾಲದಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿ ಕ್ಷಿಪ್ರ ವಾಹನ ತಪಾಸಣೆಗಳನ್ನು ಕೈಗೊಳ್ಳಲಾಗಿದೆ.<br>➢ ಪ್ರಮುಖ ಹಬ್ಬದ ಆಚರಣೆಗಳ ಸಂದರ್ಭದಲ್ಲಿ ಎಲ್ಲಾ ಸಮುದಾಯಗಳ ಮುಖಂಡರುಗಳನ್ನು ಒಳಗೊಂಡ ಶಾಂತಿ ಸಭೆಗಳನ್ನು ಜಿಲ್ಲಾ ಮಟ್ಟದಲ್ಲಿ, ಉಪ–ವಿಭಾಗದ ಮಟ್ಟದಲ್ಲಿ ಮತ್ತು ಪೊಲೀಸ್ ಠಾಣೆ ಮಟ್ಟದಲ್ಲಿ ನಡೆಸಲಾಗುತ್ತಿದೆ.<br>➢ ಗಲಭೆ ಪ್ರಕರಣಗಳಲ್ಲಿ ಭಾಗಿಯಾಗುವ ಆರೋಪಿಗಳ ವಿರುದ್ಧ ಸೂಕ್ತ ಕಾನೂನು ರೀತ್ಯಾ ಕ್ರಮಗಳನ್ನು ಜರುಗಿಸಲಾಗುತ್ತಿರುತ್ತದೆ.<br>➢ ಗುಪ್ತ ಮಾಹಿತಿ ಸಿಬ್ಬಂದಿ ಹಾಗೂ ಬೀಟ್ ಸಿಬ್ಬಂದಿಯವರ ಮೂಲಕ ಮುಂಗಡವಾಗಿ ಮಾಹಿತಿಯನ್ನು ಸಂಗ್ರಹಿಸಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಸೂಕ್ತ ಕ್ರಮ ಕೈಕೊಳ್ಳಲಾಗುತ್ತಿದೆ.<br>➢ ದಿನದ 24 ಗಂಟೆಗಳ ಕಾಲ ಗಸ್ತು ಕರ್ತವ್ಯಕ್ಕಾಗಿ ಶಕ್ತಿ ಪೆಟ್ರೋಲಿಂಗ್, ಹೊಯ್ಸಳ ವಾಹನ ನಿಯಮಿತವಾಗಿ ನಿಯೋಜಿಸಲಾಗಿ, ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವಂತಹ ರೌಡಿಗಳಿಗೆ ಕಠಿಣವಾದ ಎಚ್ಚರಿಕೆಗಳನ್ನು ನೀಡಿ, ಯಾವುದೇ ಕೃತ್ಯಗಳನ್ನು ಮಾಡಿದಾಗ ಅವರ ಮೇಲೆ ಆಗುವ ಪರಿಣಾಮಗಳ ಗಂಭೀರತೆಯ ಬಗ್ಗೆ ಅವರಿಗೆ ಮನವರಿಕೆ ಮಾಡಿಕೊಡಲಾಗಿರುತ್ತದೆ.<br>➢ ಸಾಮಾಜಿಕ ಜಾಲ ತಾಣಗಳಲ್ಲಿ ಕೋಮು ಸೌಹಾರ್ದತೆ & ಕದಡುವ ವ್ಯಕ್ತಿಗಳನ್ನು ಗುರುತಿಸಿ ಅಂಥಹವರ ಮೇಲೆ ನಿಗಾ ಇಡಲಾಗುತ್ತಿದೆ.<br>➢ ಬೆಂಗಳೂರು ನಗರದ ಮಹಿಳೆಯರ ರಕ್ಷಣೆಗಾಗಿ, ಮಹಿಳಾ ಸಹಾಯವಾಣಿ 1091 ಮತ್ತು ವನಿತಾ ಸಹಾಯವಾಣಿ 22943225 ಕಾರ್ಯ ನಿರ್ವಹಿಸುತ್ತಿರುತ್ತದೆ.<br>➢ ದಿನದ 24 ಗಂಟೆಯೂ ಸಹ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ "ಪಿಂಕ್ ಹೊಯ್ಸಳ" ಮತ್ತು 112 ಗಸ್ತು ವಾಹನಗಳು ಗಸ್ತು ಕಾರ್ಯ ನಿರ್ವಹಿಸುತ್ತಿವೆ.<br>➢ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ, ತ್ವರಿತ ನೆರವು ಸ್ಪಂದನೆಗಾಗಿ ನಿರ್ಭಯಾ ಯೋಜನೆಯಡಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಒಟ್ಟು 1050 ಮಹಿಳಾ ಹೆಲ್ಪ್ ಡೆಸ್ಕ್ (Women Help Desk) ಗಳನ್ನು ಸ್ಥಾಪಿಸಲಾಗಿರುತ್ತದೆ. |

| | | |
|---|---|---|
| | | ➢ ಮಹಿಳೆಯರ ಮತ್ತು ಮಕ್ಕಳ ಕಳ್ಳ ಸಾಗಣೆ ತಡೆಗಟ್ಟುವ ಸಲುವಾಗಿ ಸದರಿ ಪ್ರಕರಣಗಳನ್ನು ಪ್ರತ್ಯೇಕವಾಗಿ ನಿರ್ವಹಿಸಲು ರಾಜ್ಯದಲ್ಲಿ ಒಟು 35 ಮಾನವ ಕಳ್ಳ ಸಾಗಣೆ ನಿಷೇಧ ಘಟಕ (Anti Human Trafficking Unit) ಗಳನ್ನು ಮಹಿಳಾ ಪೊಲೀಸ್ ಠಾಣೆಗಳಲ್ಲಿ ಸ್ಥಾಪಿಸಲಾಗಿರುತ್ತದೆ.<br>➢ ಸಂತ್ರಸ್ಥರ ಪರಿಹಾರ ನಿಧಿ ಅಡಿಯಲ್ಲಿ ನೊಂದ ಮಹಿಳಾ ಸಂತ್ರಸ್ಥರಿಗೆ ಸರ್ಕಾರದಿಂದ ನೀಡುವ ಸಹಾಯ ಧನವನ್ನು ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರದಿಂದ ಒದಗಿಸುತ್ತಿದ್ದು ಅದಕ್ಕೆ ಪೊಲೀಸ್ ಇಲಾಖೆ ವತಿಯಿಂದ ಅಗತ್ಯ ದಾಖಲೆಗಳನ್ನು ಒದಗಿಸಲಾಗುತ್ತಿದೆ.<br><br>ರಾಜ್ಯದಲ್ಲಿ ಕೋಮು ಗಲಭೆಗಳಿಂದ ಯಾವುದೇ ರೀತಿಯ ಕೊಲೆಗಳು ನಡೆಯದಂತೆ ಹಾಗೂ ಕೊಲೆಗಳಿಗೆ ಪ್ರಚೋದನೆ ನೀಡುವ ಯಾವುದೇ ರೀತಿಯ ಸಾಮಾಜಿಕ ಜಾಲತಾಣದಲ್ಲಿ ಪ್ರಸಾರ ಮಾಡುವ ಸಂದೇಶಗಳನ್ನು ಪತ್ತೆ ಹಚ್ಚಿ ಆರೋಪಿಗಳ ಮೇಲೆ ಕ್ರಮಕೈಗೊಳ್ಳಲು ಸಾಮಾಜಿಕ ಜಾಲತಾಣ ನಿಗಾ ಘಟಕಗಳನ್ನು ಜಿಲ್ಲಾ ಹಾಗೂ ಪೊಲೀಸ್ ಠಾಣಾ ಮಟ್ಟದಲ್ಲಿ ತೆರೆಯಲಾಗಿರುತ್ತದೆ. |

ಹೆಚ್‌ಡಿ 92 ಪಿಸಿಇ 2024

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು